ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು-560012

ಸಂಖ್ಯೆ:ಪಪೂಶಿಇ/ಶೈಶಾ/ದಾ.ವೇ.ಶೈ.ಚ/10/2019-20 ದಿನಾಂಕ:22.03.2020

## ಸುತ್ತೋಲೆ

ವಿಷಯ : **NOVEL CORONA VIRUS(COVID-19)** ವೈರಸ್‌ನ ಸೊಂಕು ತಡೆಗಟ್ಟುವಿಕೆಗೆ ಮುಂಜಾಗ್ರತಾ ಕ್ರಮವಾಗಿ ಪದವಿ ಪೂರ್ವ ಕಾಲೇಜುಗಳ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಯವರಿಗೆ ರಜೆ ಘೋಷಿಸುವ ಬಗ್ಗೆ.

ಉಲ್ಲೇಖ : 1. ಸಂಖ್ಯೆ:ಪಪೂಶಿಇ/ಶೈಶಾ/ದಾವೇಶೈಚ/2019-20 ದಿನಾಂಕ:25.02.2020

2. **Secretary, Department of Higher Education/School Education & Literacy MHRD, New Delhi DO Letter No. Secry(HE)/MHRD/2020 Dt:21.03.2020.**

**NOVEL CORONA VIRUS(COVID-19)** ಸೊಂಕು ತಡೆಗಟ್ಟುವಿಕೆಗೆ ಮುಂಜಾಗ್ರತ ಕ್ರಮವಾಗಿ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಪದವಿ ಪೂರ್ವ ಕಾಲೇಜುಗಳಲ್ಲಿನ ಎಲ್ಲಾ ಬೋಧಕ ಮತ್ತು ಬೋಧಕೇತರ ಅಧಿಕಾರಿ, ಸಿಬ್ಬಂದಿಯವರಿಗೆ ದಿನಾಂಕ:31.03.2020 ರವರೆಗೆ ರಜೆಯನ್ನು ಘೋಷಿಸಲಾಗಿದೆ. ಉಲ್ಲೇಖ-1ರ ಸುತ್ತೋಲೆಯಲ್ಲಿ 2019-20ನೇ ಶೈಕ್ಷಣಿಕ ಸಾಲಿನ ಕೊನೆಯ ಕಾರ್ಯ ನಿರ್ವಹಿಸುವ ದಿನಾಂಕ ಹಾಗೂ 2020-21ನೇ ಶೈಕ್ಷಣಿಕ ಸಾಲಿನ ಕಾಲೇಜು ಆರಂಭದ ದಿನಾಂಕಗಳ ಬಗ್ಗೆ ಸೂಚಿಸಲಾಗಿತ್ತು. ಮುಂದುವರೆದು ಕಾರ್ಯದರ್ಶಿಗಳು, ಉನ್ನತ ಶಿಕ್ಷಣ/ಶಾಲಾ ಶಿಕ್ಷಣ ಮತ್ತು ಸಾಕ್ಷರತೆ, ಮಾನವ ಸಂಪನ್ಮೂಲ ಅಭಿವೃದ್ಧಿ ಇಲಾಖೆ, ನವದೆಹಲಿ ರವರು ಉಲ್ಲೇಖದಂತೆ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲು ಸೂಚಿಸಿರುತ್ತಾರೆ.

1. ಸರ್ಕಾರಿ/ಅನುದಾನಿತ/ಅನುದಾನರಹಿತ ಪದವಿ ಪೂರ್ವ ಕಾಲೇಜುಗಳಲ್ಲಿನ ಎಲ್ಲಾ ಬೋಧಕ/ಬೋಧಕೇತರ ಎಲ್ಲಾ ಅಧಿಕಾರಿ/ಸಿಬ್ಬಂದಿಗಳು ದಿನಾಂಕ:31.03.2020ರವರೆಗೆ ಮನೆಯಿಂದಲೇ ಕಾಲೇಜು ಕೆಲಸ ನಿರ್ವಹಿಸಲು ಅನುಮತಿ ನೀಡುವುದು.
2. ಬೋಧಕ ಸಿಬ್ಬಂದಿಗಳು ಈ ಅವಧಿಯಲ್ಲಿ ಈ ಕೆಳಕಂಡಂತೆ ಶೈಕ್ಷಣಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವುದು.
   ಅ. ಅನ್‌ಲೈನ್ ಮೂಲಕ ಬೋಧನೆ ಮತ್ತು ಆನ್‌ಲೈನ್ ಮೂಲಕ ಮೌಲ್ಯಮಾಪನ ಮಾಡಲು ಅಗತ್ಯವಿರುವ ಪಠ್ಯವಸ್ತು ಅಭಿವೃದ್ಧಿಪಡಿಸುವುದು.
   ಆ. ಮುಂದಿನ ಶೈಕ್ಷಣಿಕ ವರ್ಷಕ್ಕೆ ಅಗತ್ಯವಿರುವ ಪಠ್ಯ ಯೋಜನೆ/ಟಿಪ್ಪಣಿಯನ್ನು ಸಿದ್ದಪಡಿಸುವುದು. ಹಾಗೂ ತಾವು ಬೋಧಿಸುವ ವಿಷಯದ ಪಠ್ಯವಸ್ತುವನ್ನು ಅಭಿವೃದ್ಧಿಪಡಿಸುವುದು.
   ಇ. ಲೇಖನಗಲನ್ನು ಮತ್ತು ಪತ್ರಿಕೆಗಳನ್ನು ಬರೆಯುವುದು.
   ಈ. **Question Bank** ಗಾಗಿ ವಿನೂತನವಾದ ಪ್ರಶ್ನೆಗಳನ್ನು ಸಿದ್ದಪಡಿಸುವುದು.
   ಉ.ಏಕ್ ಭಾರತ್ ಶ್ರೇಷ್ಟ್ ಭಾರತ್ ಕಾರ್ಯಕ್ರಮಕ್ಕೆ ವಿನೂತನ ಯೋಜನೆಯನ್ನು ಸಿದ್ದಪಡಿಸುವುದು.
3. ದಿನಾಂಕ:31.03.2020ರವರೆಗೆ ಬೋಧಕ/ಬೋಧಕೇತರ ಎಲ್ಲಾ ಅಧಿಕಾರಿ, ಸಿಬ್ಬಂದಿಯವರ ಈ ರಜಾ ಅವಧಿಯನ್ನು ಕರ್ತವ್ಯದ ಅವಧಿ ಎಂದು ಪರಿಗಣಿಸುವುದು.
4. ಎಲ್ಲಾ ಬೋಧಕ/ಬೋಧಕೇತರ ಅಧಿಕಾರಿ, ಸಿಬ್ಬಂದಿಯವರನ್ನು ತುರ್ತು ಪರಿಸ್ಥಿತಿಯಲ್ಲಿ ಸಂಪರ್ಕಿಸಲು ಅವರ ದೂರವಾಣಿ ಸಂಖ್ಯೆಗಳನ್ನು, ಇ-ಮೇಲ್ ವಿಳಾಸಗಳನ್ನು ಕಾಲೇಜುಗಳ ಪ್ರಾಂಶುಪಾಲರು/ ಆಡಳಿತಮಂಡಳಿ ಪಡೆದುಕೊಳ್ಳುವುದು.
5. ಈ ರಜಾ ಅವಧಿಯಲ್ಲಿ ಎಲ್ಲಾ ಬೋಧಕ/ಬೋಧಕೇತರ ಅಧಿಕಾರಿ, ಸಿಬ್ಬಂದಿಯವರು ಯಾವುದೇ ಕಾರಣಕ್ಕೂ ಕೇಂದ್ರಸ್ಥಾನವನ್ನು ಬಿಡತಕ್ಕದ್ದಲ್ಲ. ಹಾಗೂ ಸರ್ಕಾರಕ್ಕೆ ಎಲ್ಲಾ ಬೋಧಕ/ಬೋಧಕೇತರ ಅಧಿಕಾರಿ, ಸಿಬ್ಬಂದಿಯವರ ಸೇವೆ ಅಗತ್ಯವಿದ್ದಾಗ ಕಡ್ಡಾಯವಾಗಿ ಸೇವೆಗೆ ಹಾಜರಾಗತಕ್ಕದ್ದು.

**2019-20ನೇ ಸಾಲಿನ ಪ್ರಥಮ ಪಿ.ಯು.ಸಿ ತರಗತಿಯ ವಾರ್ಷಿಕ ಪರೀಕ್ಷೆಯ ಫಲಿತಾಂಶವನ್ನು ಉಲ್ಲೇಖ-1ರ ಸುತ್ತೋಲೆಯಲ್ಲಿ ದಿನಾಂಕ:27.03.2020 ರಂದು ಕಾಲೇಜುಗಳಲ್ಲಿ ಪ್ರಕಟಿಸಲು ಸೂಚಿಸಲಾಗಿತ್ತು. ಆದರೆ ಸದರಿ ಫಲಿತಾಂಶ ಪ್ರಕಟಣೆಯ ದಿನಾಂಕವನ್ನು ಮುಂದೂಡಲಾಗಿದೆ. ಫಲಿತಾಂಶ ಪ್ರಕಟಣೆಯ ದಿನಾಂಕವನ್ನು ಮುಂದಿನ ದಿನಗಳಲ್ಲಿ ಪ್ರಕಟಿಸಲಾಗುವುದು.**

ನಿರ್ದೇಶಕರ ಕಛೇರಿ ಮತ್ತು ಜಿಲ್ಲಾ ಉಪನಿರ್ದೇಶಕರುಗಳ ಕಛೇರಿಗಳ ಅಧಿಕಾರಿ ಮತ್ತು ಸಿಬ್ಬಂದಿ ವರ್ಗದವರಿಗೆ ಈ ಸುತ್ತೋಲೆ ಅನ್ವಯಿಸುವುದಿಲ್ಲವಾದ್ದರಿಂದ ಎಂದಿನಂತೆ ಕಾರ್ಯನಿರ್ವಹಿಸುವುದು.

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.

ಕ್ರಮಕ್ಕಾಗಿ,

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು, ಪ.ಪೂ.ಶಿ.ಇಲಾಖೆ.
2. ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರಿಗೆ ಮತ್ತು ಉಪನ್ಯಾಸಕರು, ಸಿಬ್ಬಂದಿಯವರಿಗೆ.